D- 330 (107)

# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ. ಮರಿತಿಬ್ಬೇಗೌಡ ಇವರು ನಿಯಮ 330ರಡಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರಿಸುವ ಬಗ್ಗೆ.**

**ಪ್ರಶ್ನೆ:**

ಕರ್ನಾಟಕ ಲೋಕಸೇವಾ ಆಯೋಗದಿಂದ 2017ನೇ ಸಾಲಿನಲ್ಲಿ ಪ್ರಥಮ ದರ್ಜೆ ಸಹಾಯಕರು/ದ್ವಿತೀಯ ದರ್ಜೆ ಸಹಾಯಕರ ಹುದ್ದೆಗೆ ಆಯ್ಕೆಗೊಂಡು, ಮೂಲ ದಾಖಲಾತಿ ಪರಿಶೀಲನೆ ಪ್ರಕ್ರಿಯೆ ಮುಗಿದಿದ್ದು, ಇದರಲ್ಲಿ ಕೆಲವು ಇಲಾಖೆಗೆ ನೇಮಕಾತಿ ಮಾಡಿಕೊಳ್ಳಲು ಆರ್ಥಿಕ ಇಲಾಖೆ ಅನುಮತಿ ನೀಡಿರುತ್ತದೆ. ಆದರೆ ಉಳಿದ 44 ಇಲಾಖೆಗಳ 1414 ಅಭ್ಯರ್ಥಿಗಳಿಗೆ ಆರ್ಥಿಕ ಇಲಾಖೆ ಸಹಮತಿ ನೀಡದೆ ಇರುವುದರಿಂದ ಉಂಟಾದ ಗಂಭೀರ ಸಮಸ್ಯೆ ಕುರಿತು ಸದನದಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.

**ಮಾನ್ಯ ಮುಖ್ಯಮಂತ್ರಿಗಳ ಉತ್ತರ:**

ರಾಜ್ಯದಲ್ಲಿ ಕೋವಿಡ್-19 ನಿಂದ ಉಂಟಾದ ಪರಿಸ್ಥಿತಿಯನ್ನು ನಿಭಾಯಿಸಿ ಆರ್ಥಿಕ ಸ್ಥಿತಿಯನ್ನು ಸುಸ್ಥಿತಿಗೆ ತರುವ ನಿಟ್ಟಿನಲ್ಲಿ ಸಂಪನ್ಮೂಲವನ್ನು ಕ್ರೋಢೀಕರಿಸಲು 2020-21ನೇ ಸಾಲಿನ ಆರ್ಥಿಕ ವರ್ಷದಲ್ಲಿ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಸುತ್ತೋಲೆ ಸಂಖ್ಯೆ: ಆಇ 03 ಬಿಇಎಂ 2020, ದಿನಾಂಕ: 06.07.2020ರಲ್ಲಿ ತಡೆಹಿಡಿಯಲಾಗಿತ್ತು.

ಆದಾಗ್ಯೂ, ಅಭ್ಯರ್ಥಿಗಳ ಸೇವಾಹಿರಿತನದಲ್ಲಿ ತೊಂದರೆಯಾಗಬಾರದು ಎಂಬ ಅಂಶವನ್ನು ಪರಿಗಣಿಸಿ, ಕರ್ನಾಟಕ ಲೋಕಸೇವಾ ಆಯೋಗ/ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಮತ್ತು ಇನ್ನಿತರೆ ಆಯ್ಕೆ ಮಂಡಳಿಗಳಿಂದ ಒಂದೇ ಅಧಿಸೂಚನೆಯಡಿ ಒಂದು ಇಲಾಖೆಯಲ್ಲಿ ಆಯ್ಕೆಗೊಂಡ ಕೆಲವು ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಿದ್ದು, ಕಾರಣಾಂತರಗಳಿಂದ ಇನ್ನೂ ಕೆಲವು ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವುದು ಬಾಕಿ ಇರುವ ಪ್ರಕರಣಗಳನ್ನು ಪರಿಶೀಲಿಸಿ ಅಂತಹ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲು ಕ್ರಮವಹಿಸಲಾಗುತ್ತಿದೆ. ಅಲ್ಲದೇ, ಮಾನ್ಯ ನ್ಯಾಯಾಲಯಗಳು ನಿರ್ದೇಶನ ನೀಡಿರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸಹ ದಿನಾಂಕ: 06.07.2020ರ ಸುತ್ತೋಲೆಯಿಂದ ವಿನಾಯಿತಿ ನೀಡಲಾಗುತ್ತಿದೆ.

ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ವಿವಿಧ ಇಲಾಖೆಗಳಲ್ಲಿನ ಪ್ರಥಮ ದರ್ಜೆ ಸಹಾಯಕ ಮತ್ತು ದ್ವಿತೀಯ ದರ್ಜೆ ಸಹಾಯಕ ಹುದ್ದೆಗಳಿಗೆ ಆಯ್ಕೆಯಾಗಿರುವ ಅಭ್ಯರ್ಥಿಗಳಿಗೆ ದಿನಾಂಕ: 01.06.2021ರ ನಂತರ ನೇಮಕಾತಿ ಆದೇಶ ನೀಡಲು ಸುತ್ತೋಲೆ ಸಂಖ್ಯೆ: ಆಇ 03 ಬಿಇಎಂ 2020(ಭಾಗ) ದಿನಾಂಕ: 30.01.2021ರನ್ವಯ ಸಹಮತಿ ನೀಡಲಾಗಿದೆ.

ಸಂಖ್ಯೆ: ಆಇ 20 ಬಿಜಿಎಲ್ 2021

ಬಿ.ಎಸ್. ಯಡಿಯೂರಪ್ಪ

(ಬಿ. ಎಸ್. ಯಡಿಯೂರಪ್ಪ)
ಮುಖ್ಯಮಂತ್ರಿ